# ಪ್ರವಾದಿ ಆಮೋಸನ ಗ್ರಂಥ

**ಮುನ್ನುಡಿ**

ಪವಿತ್ರ ಗ್ರಂಥದಲ್ಲಿ ಸವಿಸ್ತಾರವಾಗಿ ಲಿಖಿತವಾದ ಪ್ರವಾದನೆಗಳಲ್ಲಿ ಆಮೋಸನ ಗ್ರಂಥ ಒಂದು ವಿಶೇಷ ಸ್ಥಾನವನ್ನು ಪಡೆದಿದೆ. ಈ ದೃಷ್ಟಿಯಲ್ಲಿ ಆಮೋಸನೇ ಪ್ರಪ್ರಥಮ ಪ್ರವಾದಿಯೆಂದು ತಜ್ಞರು ಅಭಿಪ್ರಾಯ ಪಡುತ್ತಾರೆ. ಆಮೋಸನು ದಕ್ಷಿಣದ ಜುದೇಯ ಪ್ರಾಂತ್ಯದವನಾಗಿದ್ದರೂ ಅವನು ಪ್ರವಾದನೆಮಾಡಿದ್ದು ಉತ್ತರ ಪ್ರಾಂತ್ಯದ ಜನರಿಗೆ. ಕಾಲ ಸುಮಾರು ಕ್ರಿ. ಪೂ. 800. ದೇಶದಲ್ಲಿ ಸುಖಸಂಪತ್ತು ಹೇರಳವಾಗಿತ್ತು. ಧಾರ್ಮಿಕ ಆಚರಣೆಗಳು ಸಾಂಗೋಪಾಂಗವಾಗಿ ನಡೆಯುತ್ತಿದ್ದವು. ಹೊರನೋಟಕ್ಕೆ ವಾತಾವರಣ ನೆಮ್ಮದಿಯಾಗಿತ್ತು.

ಪರಿಸ್ಥಿತಿ ಹೀಗಿದ್ದರೂ ಆಮೋಸನ ದೃಷ್ಟಿಗೆ ಎಲ್ಲವೂ ಸರಿಬೀಳಲಿಲ್ಲ. ಸುಖಸಂಪತ್ತು ಕೇವಲ ಐಶ್ವರ್ಯವಂತರಿಗೆ ಮಾತ್ರ ಸೀಮಿತವಾಗಿತ್ತು. ಎಂದಿನಂತೆ ಬಡಬಗ್ಗರ ಶೋಷಣೆ, ದೀನದಲಿತರ ತುಳಿತ, ಧನವಂತರ ಜೀವನದ ಲಕ್ಷಣಗಳಾಗಿದ್ದವು. ಬಾಹ್ಯದಲ್ಲಿ ಧಾರ್ಮಿಕ ಆಚರಣೆಗಳು ನಿಯಮಾನುಸಾರ ನಡೆಯುತ್ತಿದ್ದರೂ ಜನರ ಅಂತರಂಗದಲ್ಲಿ ವಿಶ್ವಾಸವಿರಲಿಲ್ಲ. ಪರಿಶುದ್ಧತೆ ಇರಲಿಲ್ಲ. ಎಂದೇ ದೇವರ ಶಾಪಕ್ಕೆ ಅವರು ಗುರಿಯಾಗುವರೆಂದು ಪ್ರವಾದಿ ಆಮೋಸನು ಧೈರ್ಯದಿಂದ, ಹುಮ್ಮಸ್ಸಿನಿಂದ ಪ್ರವಾದನೆಮಾಡಿದ್ದಾನೆ. 'ನ್ಯಾಯನೀತಿ ನದಿಯಂತೆ ಹರಿಯಲಿ. ಆಗ ಮಾತ್ರ ಸರ್ವೇಶ್ವರನ ಕರುಣೆಗೆ ಅಳಿದುಳಿದವರು ಪಾತ್ರರಾಗುವರು' (5–15) ಎಂದು ಘೋಷಿಸಿದ್ದಾನೆ.

**ಪರಿವಿಡಿ**


| | | | | |
|---|---|---|---|---|
| 1. ಇಸ್ರಯೇಲಿನ ನೆರೆರಾಷ್ಟ್ರಗಳಿಗೆ ನ್ಯಾಯಮೂರ್ತಿ | – | 1.1 | – | 2.5 |
| 2. ಇಸ್ರಯೇಲಿಗೆ ನ್ಯಾಯತೀರ್ಪು | – | 2.6 | – | 6.14 |
| 3. ಐದು ದರ್ಶನಗಳು | – | 7.1 | – | 9.15 |


**1** ಜುದೇಯದಲ್ಲಿ ಮಹಾ ಭೂಕಂಪ ಆಗುವುದಕ್ಕೆ ಎರಡು ವರ್ಷಗಳ ಮುಂಚೆ, ತೆಕೋವದ
ಕುರುಬರಲ್ಲೊಬ್ಬನಾದ ಆಮೋಸನಿಗೆ ಇಸ್ರಯೇಲಿನ ವಿಷಯವಾಗಿ ದೇವರಿಂದ ಬಂದ ಪ್ರಕಟಣೆಗಳು ಇವು.
ಆಗ ಜುದೇಯ ನಾಡನ್ನು ಉಜ್ಜೀಯನೆಂಬ ಅರಸನು ಆಳುತ್ತಿದ್ದ ಕಾಲ. ಅಂತೆಯೇ, ಯೋವಾಷನ
ಮಗನಾದ ಯಾರೊಬ್ಬಾಮನು ಇಸ್ರಯೇಲನ್ನು ಆಳುತ್ತಿದ್ದ ಕಾಲ.
2 ಆಮೋಸನ ಪ್ರಕಟಣೆ:
ಗರ್ಜಿಸುತಿಹನು ಸರ್ವೇಶ್ವರ ಸಿಯೋನಿನಿಂದ
ಧ್ವನಿಗೈಯುತಿಹನು ಜೆರುಸಲೇಮಿನಿಂದ:
ಬಾಡಿಹೋಗುತ್ತಿವೆ ಕುರುಬರಾ
ಹುಲ್ಲುಗಾವಲುಗಳು
ಒಣಗಿಹೋಗುತಿವೆ ಕಾರ್ಮೆಲ್ ಗುಡ್ಡದ
ನೆತ್ತಿಯ ಗಿಡಗಳು.

## ಇಸ್ರಯೇಲಿನ ನೆರೆಯವರಿಗೆ ನ್ಯಾಯತೀರ್ಪು ಸಿರಿಯಾ

3 ಸರ್ವೇಶ್ವರ ಇಂತೆನ್ನುತ್ತಾರೆ: ದಮಸ್ಕದ ಜನರು ಪದೇಪದೇ ಮಾಡಿರುವ ದ್ರೋಹಗಳಿಗಾಗಿ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಕಬ್ಬಿಣದ ಬಡಿಗೆಯಿಂದ ಧಾನ್ಯಗಳನ್ನು ಒಕ್ಕುವಂತೆ ಅವರು ಗಿಲ್ಯಾದ್ ಜನರನ್ನು ಬಡಿದುಬಿಟ್ಟಿದ್ದಾರೆ. 4ನಾನು ಹಜಾಯೇಲನ ಅರಮನೆಯ ಮೇಲೆ ಬೆಂಕಿಯನ್ನು ಸುರಿಸುವೆನು. ಅದು ಬೆನ್‍ಹದದನ ಕೋಟೆಕೊತ್ತಲಗಳನ್ನು ಕಬಳಿಸಿ ಬಿಡುವುದು. 5ದಮಸ್ಕದ ಮಹಾದ್ವಾರಗಳನ್ನು ಕೆಡವಿಹಾಕುವೆನು. ಆವೇನಿನ ಕಣಿವೆಯಲ್ಲಿ ಸಿಂಹಾಸನಾರೂಢನಾಗಿರುವವನನ್ನು ಮತ್ತು ಬೆತ್ – ಏದೆನ್‍ನಿಂದ ಆಡಳಿತಾಧಿಕಾರಿಯನ್ನು ನಿರ್ಮೂಲಮಾಡುವೆನು. ಸಿರಿಯದ ಜನರು ಕೀರ್ ಪ್ರಾಂತ್ಯಕ್ಕೆ ಸೆರೆಯಾಳುಗಳಾಗಿ ಹೋಗುವರು.” ಇದು ಸರ್ವೇಶ್ವರಸ್ವಾಮಿಯ ನುಡಿ.

## ಫಿಲಿಷ್ಟಿಯ

6 ಸರ್ವೇಶ್ವರ ಇಂತೆನ್ನುತ್ತಾರೆ: “ಗಾಜದ ಜನರು ಪದೇಪದೇ ಮಾಡಿದ ದ್ರೋಹಗಳಿಗಾಗಿ ಅವರಿಗೆ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಅವರು ಇಡೀ ಜನಾಂಗವನ್ನೇ ಸೆರೆಹಿಡಿದು ಎದೋಮ್ ನಾಡಿಗೆ ಗಡೀಪಾರು ಮಾಡಿದ್ದಾರೆ. 7ಆದಕಾರಣ ನಾನು ಗಾಜದ ಪ್ರಾಕಾರಗಳ ಮೇಲೆ ಬೆಂಕಿಯನ್ನು ಸುರಿಸುವೆನು. ಅದು ಅದರ ಕೋಟೆಕೊತ್ತಲಗಳನ್ನು ಕಬಳಿಸಿ ಬಿಡುವುದು. 8ನಾನು ಅಷ್ದೋದಿನಲ್ಲಿ ಸಿಂಹಾಸನಾರೂಢನಾಗಿ ಇರುವವನನ್ನೂ ಅಷ್ಕೆಲೋನಿನಲ್ಲಿ ಆಡಳಿತಾಧಿಕಾರಿಯನ್ನೂ ನಿರ್ಮೂಲಮಾಡುವೆನು. ಎಕ್ರೋನಿನ ಪಟ್ಟಣವನ್ನು ಶಿಕ್ಷಿಸುವೆನು. ಫಿಲಿಷ್ಟಿಯರಲ್ಲಿ ಅಳಿದುಳಿದವರೆಲ್ಲರೂ ನಾಶವಾಗಿ ಹೋಗುವರು,” ಇದೂ ಸರ್ವೇಶ್ವರಸ್ವಾಮಿಯ ನುಡಿ.

## ಟೈರ್

9 ಸರ್ವೇಶ್ವರ ಇಂತೆನ್ನುತ್ತಾರೆ: “ಟೈರ್ ಪ್ರಾಂತ್ಯದ ಜನರು ಪದೇಪದೇ ಮಾಡಿದ ದ್ರೋಹಗಳಿಗಾಗಿ ಅವರಿಗೆ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಸೋದರಪ್ರೇಮದ ಒಡಂಬಡಿಕೆಯನ್ನು ಅವರು ಮರೆತುಬಿಟ್ಟರು. ಅವರು ಇಡೀ ರಾಷ್ಟ್ರವನ್ನೇ ಸೆರೆಹಿಡಿದು ಎದೋಮ್ ನಾಡಿಗೆ ಗಡೀಪಾರು ಮಾಡಿದ್ದಾರೆ. 10ಆದಕಾರಣ ನಾನು ಟೈರಿನ ಪ್ರಾಕಾರಗಳ ಮೇಲೆ ಬೆಂಕಿಯನ್ನು ಸುರಿಸುವೆನು. ಅದು ಅದರ ಕೋಟೆಕೊತ್ತಲಗಳನ್ನು ಕಬಳಿಸಿ ಬಿಡುವುದು.”

## ಎದೋಮ್

11 ಸರ್ವೇಶ್ವರ ಇಂತೆನ್ನುತ್ತಾರೆ: ಎದೋಮ್ ಪ್ರಾಂತ್ಯದ ಜನರು ಪದೇಪದೇ ಮಾಡಿದ ದ್ರೋಹಗಳಿಗಾಗಿ ಅವರಿಗೆ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಅವರು ತಮ್ಮ ಸೋದರ ನಾಡಿನವರಾದ ಇಸ್ರಯೇಲರನ್ನು ಓಡಿಸಿದರು. ಅವರಿಗೆ ಕರುಣೆತೋರದೆ, ಕೊನೆಯವರೆವಿಗೂ ರೋಷವನ್ನೇ ಸಾಧಿಸಿದರು. 12ಆದುದರಿಂದ ನಾನು ತೇಮಾನ್ ಪಟ್ಟಣದ ಮೇಲೆ ಬೆಂಕಿಯನ್ನು ಸುರಿಸುವೆನು. ಅದು ಬೊಚ್ರದ ಕೋಟೆಕೊತ್ತಲಗಳನ್ನು ಕಬಳಿಸಿಬಿಡುವುದು.

## ಅಮ್ಮೋನ್

13 ಸರ್ವೇಶ್ವರ ಇಂತೆನ್ನುತ್ತಾರೆ: “ಅಮ್ಮೋನ್ಯರು ಪದೇಪದೇ ಮಾಡಿದ ಪಾಪಗಳಿಗಾಗಿ ಅವರಿಗೆ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಅವರು ತಮ್ಮ ನಾಡಿನ (ಗಡಿ) ವಿಸ್ತರಣೆಗಾಗಿ ಗರ್ಭಿಣಿಯರ ಹೊಟ್ಟೆಯನ್ನೇ ತಿವಿದು ಸೀಳಿಬಿಟ್ಟಿದ್ದಾರೆ. 14ಆದಕಾರಣ ನಾನು ರಬ್ಬದ ಪ್ರಾಕಾರಗಳ ಮೇಲೆ ಬೆಂಕಿಯನ್ನು ಸುರಿಸುವೆನು. ಅದು ಅದರ ಕೋಟೆಕೊತ್ತಲಗಳನ್ನು ಕಬಳಿಸಿಬಿಡುವುದು. ಆಗ ಯುದ್ಧಾರ್ಭಟವೂ ಚಂಡಮಾರತದಂಥ ಪ್ರಚಂಡ ಕಾದಾಟವೂ ಉಂಟಾಗುವುವು. 15ಅರಸನೂ ರಾಜ್ಯಾಧಿಕಾರಿಗಳೂ ಒಟ್ಟಾಗಿ ಸೆರೆಹೋಗುವರು.” ಇದು ಸರ್ವೇಶ್ವರ ಸ್ವಾಮಿಯ ನುಡಿ.

## ಮೋವಾಬ್

**2** ಸರ್ವೇಶ್ವರ ಇಂತೆನ್ನುತ್ತಾರೆ: "ಮೋವಾಬಿನ ಜನರು ಪದೇಪದೇ ಮಾಡಿದ ಪಾಪಗಳಿಗಾಗಿ ಅವರಿಗೆ
ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಅವರು ಎದೋಮಿನ ಅರಸನ ಎಲುಬುಗಳನ್ನು
ಸುಟ್ಟು ಸುಣ್ಣಮಾಡಿದ್ದಾರೆ. 2ಆದಕಾರಣ ಮೋವಾಬಿನ ಮೇಲೆ ಬೆಂಕಿಯನ್ನು ಸುರಿಸುವೆನು. ಅದು
ಕೆರಿಯೋತಿನ ಕೋಟೆಕೊತ್ತಲಗಳನ್ನು ಕಬಳಿಸಿಬಿಡುವುದು. ಸೈನಿಕರ ಆರ್ಭಟ, ರಣಕಹಳೆಗಳ ಗರ್ಜನೆ,
ಯುದ್ಧದ ಕೋಲಾಹಲ – ಇವುಗಳ ಮಧ್ಯೆ ಮೋವಾಬಿನ ಜನರು ಮಡಿಯುವರು. 3ನಾನು ಅವರ
ಅಧಿಪತಿಯನ್ನು ಕೊಂದು, ರಾಜ್ಯಾಧಿಕಾರಿಗಳನ್ನು ಸಂಹರಿಸುವೆನು." ಇದು ಸರ್ವೇಶ್ವರಸ್ವಾಮಿಯ ನುಡಿ.

## ಜುದೇಯ

4 ಸರ್ವೇಶ್ವರ ಇಂತೆನ್ನುತ್ತಾರೆ: "ಜುದೇಯದ ಜನರು ಪದೇಪದೇ ಮಾಡಿದ ಪಾಪಗಳಿಗಾಗಿ ಅವರಿಗೆ
ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಏಕೆಂದರೆ ಅವರು ನನ್ನ ಧರ್ಮಶಾಸ್ತ್ರವನ್ನು
ತೃಣೀಕರಿಸಿದ್ದಾರೆ. ನನ್ನ ವಿಧಿನಿಯಮಗಳನ್ನು ಮೀರಿದ್ದಾರೆ. ಅವರ ಪೂರ್ವಜರು ಆರಾಧಿಸಿದ
ಸುಳ್ಳುದೇವತೆಗಳನ್ನು ಪೂಜಿಸುತ್ತಾ ದಾರಿತಪ್ಪಿದ್ದಾರೆ. 5ಆದಕಾರಣ ನಾನು ಜುದೇಯದ ಮೇಲೆ ಬೆಂಕಿಯನ್ನು
ಸುರಿಸುವೆನು. ಅದು ಜೆರುಸಲೇಮಿನ ಕೋಟೆಕೊತ್ತಲಗಳನ್ನು ಕಬಳಿಸಿಬಿಡುವುದು."

## ಇಸ್ರಯೇಲ್

6 ಸರ್ವೇಶ್ವರ ಇಂತೆನ್ನುತ್ತಾರೆ: "ಇಸ್ರಯೇಲಿನ ಜನರು ಪದೇ ಪದೇ ಮಾಡಿದ ಪಾಪಗಳಿಗಾಗಿ
ಅವರಿಗೆ ಆಗಬೇಕಾದ ದಂಡನೆಯನ್ನು ನಾನು ರದ್ದುಗೊಳಿಸುವುದಿಲ್ಲ. ಅವರು ಬೆಳ್ಳಿಬಂಗಾರಕ್ಕಾಗಿ ಸಜ್ಜನರನ್ನು
ಮಾರಿಬಿಡುತ್ತಾರೆ. ಒಂದು ಜೊತೆ ಜೋಡುಗಳ ಸಾಲವನ್ನು ಸಹ ತೀರಿಸಲಾಗದ ಬಡಬಗ್ಗರನ್ನೂ
ವಿಕ್ರಯಿಸುತ್ತಾರೆ. 7ದಿಕ್ಕಿಲ್ಲದವರ ತಲೆಗಳನ್ನು ಬೀದಿಯ ಧೂಳಿನಂತೆ ತುಳಿದು ಬಿಡುತ್ತಾರೆ. ದೀನದಲಿತರಿಗೆ
ನ್ಯಾಯದೊರಕದಂತೆ ಮಾಡುತ್ತಾರೆ. ತಂದೆಯೂ ಮಗನೂ ಒಬ್ಬ ಮಹಿಳೆಯನ್ನು ಇಟ್ಟುಕೊಂಡು ನನ್ನ
ಪವಿತ್ರನಾಮಕ್ಕೆ ಅಪಕೀರ್ತಿ ತರುತ್ತಾರೆ. 8ಪ್ರತಿಯೊಂದು ಪ್ರಾರ್ಥನಾಲಯದಲ್ಲಿಯೂ ಮಲಗುತ್ತಾರೆ.
ಬಡವರಿಂದ ಅಡವಾಗಿ ಇಟ್ಟುಕೊಂಡ ಬಟ್ಟೆಗಳ ಮೇಲೆಯೇ ಬಿದ್ದಿರುತ್ತಾರೆ. ವಿಧಿ ಇಲ್ಲದೆ ದಂಡತೆರ
ಬೇಕಾದವರಿಂದ ಹೆಂಡವನ್ನು ತಂದು ದೇವರ ಮಂದಿರದಲ್ಲೇ ಕುಡಿಯುತ್ತಾರೆ.

9 "ಆದರೂ ನನ್ನ ಜನರೇ, ನಿಮಗೆ ಎದುರಾಗಿ ನಿಂತ ಅಮೋರ್‍ಯದವರನ್ನು ಧ್ವಂಸಮಾಡಿದೆನು.
ದೇವ ದಾರು ಮರದಂತೆ ಎತ್ತರವಾಗಿ, ಅಲ್ಲೋನ್ ಮರದಂತೆ ಬಲಿಷ್ಠರಾಗಿ ಇದ್ದ ನಿಮ್ಮ ಶತ್ರು
ಅಮೋರ್‍ಯದವರನ್ನು ನಾಶಪಡಿಸಿದೆನು. ಮರದ ಮುಡಿಯಿಂದ ಫಲವನ್ನೂ ಅಡಿಯಿಂದ ಬೇರನ್ನೂ
ಕಿತ್ತುಹಾಕುವಂತೆ ಅವರನ್ನು ನಿರ್ಮೂಲ ಮಾಡುವೆನು. 10ಈಜಿಪ್ಟಿನಿಂದ ನಿಮ್ಮನ್ನು ಹೊರತಂದವನು ನಾನೇ.
ನಲವತ್ತು ವರ್ಷಗಳ ಕಾಲ ಅರಣ್ಯದ ಮಾರ್ಗವಾಗಿ ನಿಮ್ಮನ್ನು ನಡೆಸಿ ಕರೆತಂದು, ಅಮೋರ್‍ಯದವರ ನಾಡನ್ನು
ನಿಮಗೆ ದೊರಕಿಸಿ ಕೊಟ್ಟವನು ನಾನೇ. 11ನಿಮ್ಮ ಪುತ್ರರಲ್ಲಿ ಕೆಲವರನ್ನು ಪ್ರವಾದಿಗಳನ್ನಾಗಿ, ನಿಮ್ಮ
ಯುವಜನರಲ್ಲಿ ಕೆಲವರನ್ನು ನಾಜೀರರನ್ನಾಗಿ ಸಿದ್ಧಪಡಿಸಿದವನು ನಾನೇ. ಇಸ್ರಯೇಲಿನ ಜನರೇ, ಇದು
ನಿಜವಲ್ಲವೇ? ನೀವೇ ಹೇಳಿ.

12 "ನೀವಾದರೋ, ನಾಜೀರರು ವ್ರತ ಮುರಿದು ಮದ್ಯಪಾನ ಸೇವಿಸುವಂತೆ ಮಾಡಿದಿರಿ.
ಪ್ರವಾದಿಗಳು ಪ್ರವಾದನೆ ಹೇಳದಂತೆ ಆಜ್ಞೆ ಮಾಡಿದಿರಿ. 13ಆದ್ದರಿಂದ ಧಾನ್ಯ ತುಂಬಿದ ಬಂಡೆ ನಸುಕುವಂತೆ
ನಿಮ್ಮನ್ನು ಇದ್ದಲ್ಲಿಯೇ ನಸುಕಿ ಬಿಡುವೆನು. 14ನಿಮ್ಮಲ್ಲಿ ದೌಡೋಡುವವನು ಕೂಡ ತಲೆತಪ್ಪಿಸಿಕೊಳ್ಳಲಾರನು.
ಬಲಿಷ್ಠನೂ ಬಲಹೀನನಾಗುವನು. ಪರಾಕ್ರಮಿಯೂ ಪ್ರಾಣ ಉಳಿಸಿಕೊಳ್ಳಲಾರನು. 15ಬಿಲ್ಲುಹಿಡಿದವನೂ
ನಿಲ್ಲಲಾರನು. ಓಟಗಾರನೂ ಸಿಕ್ಕಿಬೀಳುವನು. ರಾಹುತನು ರಕ್ಷಣೆ ಪಡೆಯಲಾರನು. 16ಪ್ರಬಲವಾಗಿದ್ದವರಲ್ಲಿ
ಧೀರನಾದವನು ಸಹ ನಗ್ನನಾಗಿ ಪಲಾಯನ ಮಾಡುವನು." ಇದು ಸರ್ವೇಶ್ವರ ಸ್ವಾಮಿಯ ನುಡಿ.

**3** ಇಸ್ರಯೇಲಿನ ಜನರೇ, ಕಿವಿಗೊಡಿ. ಈಜಿಪ್ಟ್ ದೇಶದಿಂದ ನಿಮ್ಮನ್ನು ಬಿಡುಗಡೆ ಮಾಡಿ ಕರೆತಂದ
ಸರ್ವೇಶ್ವರ ನಿಮ್ಮ ವಿರುದ್ಧವಾಗಿ ನುಡಿಯುವ ಮಾತುಗಳನ್ನು ಆಲಿಸಿರಿ: 2"ಜಗದ ಜನಾಂಗಗಳಲ್ಲಿ ನನಗೆ ಆಪ್ತರಾದವರೆಂದರೆ ನೀವು. ಆದಕಾರಣ ನೀವು ಮಾಡಿರುವ ಎಲ್ಲಾ ಪಾಪಗಳಿಗೆ ತಕ್ಕ ಪ್ರಾಯಶ್ಚಿತ್ತವನ್ನು ಸವಿಯುವಂತೆ ಮಾಡುವೆನು."

### ಪ್ರವಾದಿಯ ಕರ್ತವ್ಯ

3 ಗೊತ್ತುಗುರಿಯಿಲ್ಲದೆ ಯಾರಾದರಿಬ್ಬರು ಜೊತೆಯಾಗಿ ಪ್ರಯಾಣ ಮಾಡುವುದುಂಟೆ?
4 ಬೇಟೆ ಕಂಡಾಗಲ್ಲದೆ ಸಿಂಹವು ಕಾಡಿನಲ್ಲಿ ಗರ್ಜಿಸುವುದುಂಟೆ? ಏನನ್ನೂ ಹಿಡಿಯದೆ ಯುವಸಿಂಹವು ಗುಹೆಯಲ್ಲೆ ಗುರುಗುಟ್ಟುವುದುಂಟೆ?
5 ಕಾಳಿಲ್ಲದೆ ಪಕ್ಷಿ ಬಲೆಗೆ ಬೀಳುವುದುಂಟೆ? ಏನೂ ಸಿಕ್ಕಿಕೊಳ್ಳದೆ ಬೋನು ಮೇಲಕ್ಕೆ ಏರುವುದುಂಟೆ?
6 ರಣಕಹಳೆ ಮೊಳಗಲು ಜನರು ಬೆದರದೆ ಇರುವುದುಂಟೆ? ಸರ್ವೇಶ್ವರನಿಂದಲ್ಲದೆ ಪಟ್ಟಣಕ್ಕೆ ಕೇಡು ತಟ್ಟುವುದುಂಟೆ?
7 ತನ್ನ ಪರಿಚಾರಕರಾದ ಪ್ರವಾದಿಗಳಿಗೆ ತನ್ನ ಯೋಜನೆಯನ್ನು ತಿಳಿಸದೆ ಸ್ವಾಮಿ ಸರ್ವೇಶ್ವರ ಏನೂ ಮಾಡುವುದಿಲ್ಲ.
8 ಸಿಂಹದ ಗರ್ಜನೆಯನ್ನು ಕೇಳಿ ಹೆದರದಿರುವವರು ಯಾರು? ಸ್ವಾಮಿ ಸರ್ವೇಶ್ವರನ ನುಡಿಯನ್ನು ಕೇಳಿ ಪ್ರವಾದನೆ ಮಾಡದಿರುವವರು ಯಾರು?"

### ಸಮಾರ್ಯದ ವಿನಾಶ

9 ಅಷ್ಡೋದಿನ ಅರಮನೆಗಳಲ್ಲೂ ಈಜಿಪ್ಟಿನ ಸೌಧಗಳಲ್ಲೂ ಹೀಗೆಂದು ಪ್ರಕಟಿಸಿರಿ; "ಸಮಾರ್ಯದ ಬೆಟ್ಟಗುಡ್ಡಗಳಿಗೆ ಕೂಡಿಬನ್ನಿ. ಪಟ್ಟಣದಲ್ಲಿ ಎಷ್ಟೊಂದು ಗಲಭೆಗೊಂದಲ, ಎಷ್ಟೊಂದು ಹಿಂಸಾಚಾರ ನಡೆಯುತ್ತಿದೆ, ನೋಡಿ.
10 "ಹಿಂಸಾಚಾರದಿಂದ ಹಾಗು ಸುಲಿಗೆಯಿಂದ ಗಳಿಸಿದ್ದನ್ನು ಜನರು ತಮ್ಮ ಮಳಿಗೆಗಳಲ್ಲಿ ತುಂಬಿಸಿಕೊಂಡಿದ್ದಾರೆ. ಅಂಥ ಜನರಿಗೆ ನ್ಯಾಯ ನೀತಿ ತಿಳಿಯದು," ಎಂದು ಸರ್ವೇಶ್ವರ ಹೇಳುತ್ತಾರೆ.
11ಇಂತಿರಲು ಸ್ವಾಮಿ ಸರ್ವೇಶ್ವರ ಹೇಳುವುದೇನೆಂದರೆ: "ಶತ್ರುಗಳು ನಿಮ್ಮ ನಾಡಿಗೆ ಮುತ್ತಿಗೆ ಹಾಕುವರು. ನಿಮ್ಮ ಕೋಟೆ ಕೊತ್ತಲಗಳನ್ನು ನೆಲಸಮ ಮಾಡುವರು. ನಿಮ್ಮ ಸೌಧಗಳನ್ನು ಸೂರೆಮಾಡುವರು."
12 ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ಸಿಂಹದ ಬಾಯಿಗೆ ಸಿಕ್ಕಿದ ಕುರಿಯ ಅಂಗಗಳಲ್ಲಿ ಕಿವಿಕಾಲು ಮಾತ್ರ ಕುರುಬನಿಗೆ ದಕ್ಕೀತು. ಅಂತೆಯೇ ಸಮಾರ್ಯದ ಸುಖಾಸನಗಳಲ್ಲೂ ಸುಪ್ಪತ್ತಿಗೆ ಮೇಲೂ ಹಾಯಾಗಿ ಒರಗಿಕೊಂಡಿರುವ ಇಸ್ರಯೇಲರಲ್ಲಿ ಕೆಲವೇ ಕೆಲವರು ಮಾತ್ರ ಉಳಿಯುವರು.
13ಈಗ ಕೇಳಿ, ಯಕೋಬನ ವಂಶದವರಿಗೆ ಎಚ್ಚರಿಕೆ ನೀಡಿ:
14ಇಸ್ರಯೇಲರ ಪಾಪಕೃತ್ಯಗಳಿಗಾಗಿ ಅವರನ್ನು ದಂಡಿಸುವೆನು, ಬೇತೇಲಿನ ಯಜ್ಞವೇದಿಗಳನ್ನು ಚೂರುಚೂರು ಮಾಡುವೆನು. ಆ ಯಜ್ಞವೇದಿಯ ಮೂಲೆಕೊಂಬುಗಳನ್ನು ಕತ್ತರಿಸಿ ಬೀದಿಪಾಲಾಗಿಸುವೆನು.
15ಚಳಿಗಾಲ, ಬೇಸಿಗೆಕಾಲಗಳ ವಿಹಾರ ಗೃಹಗಳನ್ನು ವಿನಾಶಮಾಡುವೆನು. ದಂತನಿರ್ಮಿತ ಮಂದಿರಗಳು ಧ್ವಂಸವಾಗುವುವು. ಮಹಾಸೌಧಗಳು ನೆಲಸಮವಾಗುವುವು. ಸರ್ವೇಶ್ವರ ಸ್ವಾಮಿಯ ನುಡಿಯಿದು."

**4** ಸಮಾರ್ಯದ ಗುಡ್ಡಗಳ ಮೇಲೆ ಮೇದು, ಬಾಷಾನಿನ ಕೊಬ್ಬಿನ ಕಾಮಧೇನುಗಳಂತಿರುವ ಮಹಿಳೆಯರೇ,
ಕೇಳಿ: ಬಡವರನ್ನು ಹಿಂಸಿಸಿ, ದಿಕ್ಕಿಲ್ಲದವರನ್ನು ಶೋಷಿಸಿ, ನಿಮ್ಮ ಪತಿರಾಯರಿಗೆ, "ಮದ್ಯತರಿಸಿರಿ, ಕುಡಿಯೋಣ" ಎಂದು ಹೇಳುವವರೇ, ಇದನ್ನು ಕೇಳಿ:
2"ದಿನಗಳು ಬರುವುವು. ಆಗ ನಿಮ್ಮನ್ನು ಕೊಂಡಿಗಳಿಂದ ಎಳೆದುಕೊಂಡು ಹೋಗುವರು; ನಿಮ್ಮಲ್ಲಿ ಅಳಿದುಳಿದವರನ್ನು ಗಾಳಕ್ಕೆ ಸಿಕ್ಕಿದ ಮೀನಿನಂತೆ ಸೆಳೆದೊಯ್ಯುವರು." ಒಡೆಯರಾದ ದೇವರು ಇದನ್ನು ಆಣೆಯಿಟ್ಟು ನುಡಿದಿದ್ದಾರೆ.
3"ನೀವು ಎಲ್ಲರು

ಇದ್ದಕ್ಕಿದ್ದಂತೆ ಒಬ್ಬರ ಹಿಂದೆ ಒಬ್ಬರು ಗೋಡೆಯ ಬಿರುಕುಗಳ ಮೂಲಕ ಹೆರ್ಮೋನ್ ಕಡೆಗೆ ತಳ್ಳಲ್ಪಡುವಿರಿ,” ಇದು ಸರ್ವೇಶ್ವರ ಸ್ವಾಮಿಯ ನುಡಿ.

### ಇಸ್ರಯೇಲಿನ ಹಟಮಾರಿತನ

4 ಸ್ವಾಮಿ ಸರ್ವೇಶ್ವರ ಇಂತೆನ್ನುತ್ತಾರೆ: “ಇಸ್ರಯೇಲಿನ ಜನರೇ, ಪಾಪ ಮಾಡಬೇಕಾದರೆ, ಬೇತೇಲಿಗೆ
ಹೋಗಿ ಪಾಪಮಾಡಿರಿ. ಗಿಲ್ಗಾಲಿಗೆ ಹೋಗಿ ಯಥೇಚ್ಛವಾಗಿ ದ್ರೋಹಮಾಡಿರಿ. ಪ್ರತಿದಿನವೂ ಪ್ರಾತಃಕಾಲದ
ಬಲಿಗಳನ್ನು ಅರ್ಪಿಸಿರಿ. ಮೂರು ದಿನಗಳಿಗೊಮ್ಮೆ ದಶಮಾಂಶವನ್ನು ಸಲ್ಲಿಸಿರಿ. 5ಹುಳಿಹಿಟ್ಟಿನ ರೊಟ್ಟಿಯನ್ನು
ಹೋಮಮಾಡಿ ಉಪಕಾರಸ್ಮರಣೆ ಮಾಡಿಕೊಳ್ಳಿ. ಇಷ್ಟಬಂದಂತೆ ಕಾಣಿಕೆಗಳನ್ನು ಸಮರ್ಪಿಸಿ ಪ್ರಚಾರ
ಮಾಡಿಕೊಳ್ಳಿ. ಹೀಗೆ ಮಾಡುವುದು ನಿಮಗೆ ಇಷ್ಟವಲ್ಲವೆ?” ಇದು ಸರ್ವೇಶ್ವರಸ್ವಾಮಿಯ ನುಡಿ.

6 “ನಿಮ್ಮ ಪಟ್ಟಣಗಳಲ್ಲಿ ಹೊಟ್ಟೆಗೆ ಹಿಟ್ಟಿಲ್ಲದಂತೆ ಮಾಡಿದವನು ನಾನೇ. ನೀವು ಹೋದೆಡೆಗಳಲ್ಲೆಲ್ಲ
ನಿಮಗೆ ರೊಟ್ಟಿ ಸಿಗದಂತೆ ಮಾಡಿದವನು ನಾನೇ. ಆದರೂ ನೀವು ನನ್ನ ಬಳಿಗೆ ಹಿಂದಿರುಗಲಿಲ್ಲ.” ಇದು
ಸರ್ವೇಶ್ವರಸ್ವಾಮಿಯ ನುಡಿ. 7“ಸುಗ್ಗಿಗೆ ಮೂರು ತಿಂಗಳಿರುವಾಗಲೂ ಮಳೆಯನ್ನು ತಡೆದವನು ನಾನೇ.
ಒಂದೂರಿಗೆ ಮಳೆಯಾಗುವಂತೆಯೂ ಮತ್ತೊಂದೂರಿಗೆ ಮಳೆಯಾಗದಂತೆಯೂ ಮಾಡಿದವನು ನಾನೇ.
ಒಂದು ಹೊಲಕ್ಕೆ ಮಳೆಯಾಗುವಂತೆ, ಮತ್ತೊಂದು ಹೊಲ ಮಳೆಯಿಲ್ಲದೆ ಬಾಡಿಹೋಗುವಂತೆ
ಮಾಡಿದವನು ನಾನೇ. 8ಹಲವಾರು ಊರಿನವರು ಕುಡಿಯುವ ನೀರಿಗಾಗಿ ಪರದಾಡುತ್ತಾ ಪಕ್ಕದ ಪಟ್ಟಣಕ್ಕೆ
ಹೋದರೂ ಅವರ ದಾಹವು ಇಂಗಲಿಲ್ಲ. ಆದರೂ ನೀವು ನನ್ನ ಬಳಿಗೆ ಹಿಂದಿರುಗಲಿಲ್ಲ,” ಎನ್ನುತ್ತಾರೆ
ಸರ್ವೇಶ್ವರ.

9 “ಬಿಸಿಗಾಳಿಯನ್ನು ಕಳುಹಿಸಿ ನಿಮ್ಮ ಪೈರು ಒಣಗುವಂತೆ ಮಾಡಿದೆ. ನಿಮ್ಮ ಬೆಳೆ ಬೂಷ್ಟು ಹಿಡಿದು ನಾಶವಾಗುವಂತೆ ಮಾಡಿದೆ. ನಿಮ್ಮ ವನವೃಕ್ಷಗಳನ್ನೂ ದ್ರಾಕ್ಷಾತೋಟಗಳನ್ನೂ ಹಾಳು ಮಾಡಿದೆ. ನಿಮ್ಮ ಅಂಜೂರದ ಗಿಡಗಳನ್ನೂ ಎಣ್ಣೆಮರಗಳನ್ನೂ ಮಿಡತೆಗಳು ತಿಂದುಬಿಡುವಂತೆ ಮಾಡಿದೆ. ಆದರೂ ನೀವು ನನ್ನ ಬಳಿಗೆ ಹಿಂದಿರುಗಲಿಲ್ಲ,” ಎನ್ನುತ್ತಾರೆ ಸರ್ವಶಕ್ತ ಸರ್ವೇಶ್ವರ.

10 “ಹಿಂದೊಮ್ಮೆ ಈಜಿಪ್ಟಿಗೆ ನಾನು ಮಾಡಿದಂತೆ ನಿಮ್ಮನ್ನು ವ್ಯಾಧಿಯಿಂದ ಬಾಧಿಸಿದೆ. ನಿಮ್ಮ ಯುವಜನರು ಖಡ್ಗಕ್ಕೆ ತುತ್ತಾಗುವಂತೆ ಮಾಡಿದೆ. ನಿಮ್ಮ ಕುದುರೆಗಳು ಸೂರೆಯಾಗುವಂತೆ ಮಾಡಿದೆ. ನಿಮ್ಮ ದಂಡಿನವರ ಹೆಣಗಳು ಕೊಳೆತು ನಾರುವ ದುರ್ವಾಸನೆ ನಿಮ್ಮ ಮೂಗಿಗೆ ಬಡಿಯುವಂತೆ ಮಾಡಿದೆ. ಆದರೂ ನೀವು ನನ್ನ ಬಳಿಗೆ ಹಿಂತಿರುಗಲಿಲ್ಲ,” ಎನ್ನುತ್ತಾರೆ ಸರ್ವೇಶ್ವರ ಸ್ವಾಮಿ.

11 “ಒಮ್ಮೆ ಸೊದೋಮ್ ಮತ್ತು ಗೊಮೋರಾ ಪಟ್ಟಣಗಳನ್ನು ಕೆಡವಿದಂತೆ ನಾನು ನಿಮ್ಮ ಪಟ್ಟಣ
ಪಾಳೆಯಗಳನ್ನು ಕೆಡವಿದೆನು, ಉರಿಯುವ ಬೆಂಕಿಯಿಂದ ಎಳೆದ ಕೊಳ್ಳಿಯಂತೆ ನೀವು ಇದ್ದಿರಿ. ಆದರೂ
ನೀವು ನನ್ನ ಬಳಿಗೆ ಹಿಂತಿರುಗಲಿಲ್ಲ,” ಎನ್ನುತ್ತಾರೆ ಸರ್ವೇಶ್ವರ. 12ಆದುದರಿಂದ ಇಸ್ರಯೇಲಿನ ಜನರೇ,
ನಿಮ್ಮನ್ನು ದಂಡಿಸಿಯೇ ತೀರುವೆನು. ಓ ಇಸ್ರಯೇಲರೇ, ನ್ಯಾಯತೀರ್ಪನ್ನು ಕೊಡಲು ಬರಲಿರುವ ನಿಮ್ಮ
ದೇವರನ್ನು ಎದುರುಗೊಳ್ಳಲು ಸಿದ್ಧಮಾಡಿಕೊಳ್ಳಿ:

13 ಬೆಟ್ಟಗುಡ್ಡಗಳನ್ನು ರೂಪಿಸಿದಾತ ದೇವನೇ
ಗಾಳಿಬಿರುಗಾಳಿಯನು ಸೃಜಿಸಿದಾತ ಆತನೇ
ತನ್ನಾಲೋಚನೆಯನ್ನು ನರರಿಗರುಹಿಸಿದವ ದೇವನೇ
ಹಗಲನ್ನು ಇರುಳನ್ನಾಗಿಸುವವನು ಆತನೇ
ಪೊಡವಿಯ ಉನ್ನತ ಸ್ಥಾನದಲ್ಲಿ
ನಡೆದಾಡುವವನಾತನೇ
ಆತನ ನಾಮಧೇಯ – ಸೇನಾಧೀಶ್ವರ
ದೇವರಾದ ಸರ್ವೇಶ್ವರನೇ.

## ಪಶ್ಚಾತ್ತಾಪಕ್ಕೆ ಕರೆ

**5** ಇಸ್ರಯೇಲಿನ ಜನರೇ, ನಿಮ್ಮನ್ನು ಕುರಿತು ನಾನು ಹಾಡುವ ಈ ಶೋಕಗೀತೆಯನ್ನು ಕೇಳಿ:

2 “ಕನ್ಯೆ ಇಸ್ರಯೇಲಳು ಬಿದ್ದಿಹಳು ಕೆಳಗೆ
ಅಶಕ್ತಳು ಆಕೆ ಮರಳಿ ಏಳಲು ಮೇಲಕೆ
ದಿಕ್ಕಿಲ್ಲದೆ ಒರಗಿಹಳು ಧರೆಯ ಮೇಲೆ
ಮೇಲೆತ್ತಲು ಯಾರೂ ಗತಿಯಿಲ್ಲದ ಅಬಲೆ.”

3 ಒಡೆಯರಾದ ಸರ್ವೇಶ್ವರ ಇಂತೆನ್ನುತ್ತಾರೆ: “ಯುದ್ಧಕ್ಕೆ ಹೊರಟ ಸಾವಿರ ಮಂದಿ ಸೈನಿಕರಲ್ಲಿ ಪಟ್ಟಣಕ್ಕೆ ಮರಳಿದವರು ನೂರೇ ಮಂದಿ; ರಣರಂಗಕ್ಕೆ ಹೊರಟ ನೂರು ಮಂದಿ ಯೋಧರಲ್ಲಿ ಇಸ್ರಯೇಲಿಗೆ ಮರಳಿದವರು ಹತ್ತೇ ಮಂದಿ.”

4 ಇಸ್ರಯೇಲ್ ಮನೆತನಕ್ಕೆ ಸರ್ವೇಶ್ವರ ಹೇಳುವುದೇನೆಂದರೆ: “ನನ್ನನ್ನು ಅರಸಿರಿ, ನೀವು
ಬದುಕುವಿರಿ.
5ಬೇತೇಲಿಗೆ ಹೋಗಬೇಡಿ, ಗಿಲ್ಗಾಲನ್ನು ಸೇರಬೇಡಿ. ಬೆರ್ಷೆಬಾಕ್ಕೆ ಯಾತ್ರೆ ಹೋಗಬೇಡಿ. ಗಿಲ್ಗಾಲ್ ಗಡೀಪಾರಾಗುವುದು. ಬೇತೇಲ್ ಬಯಲಾಗುವುದು.”

6 ಸರ್ವೇಶ್ವರಸ್ವಾಮಿಗೆ ಅಭಿಮುಖರಾಗಿರಿ, ನೀವು ಬದುಕುವಿರಿ. ಇಲ್ಲವಾದರೆ ಅವರು ಬೆಂಕಿಯೋಪಾದಿ ಜೋಸೆಫನ ಮನೆತನದ ಮೇಲೆ ಎರಗಿಯಾರು. ಬೇತೇಲಿನ ಜನರನ್ನು ಭಸ್ಮಮಾಡಿಯಾರು. ಆ ಬೆಂಕಿಯನ್ನು ಯಾರೂ ಆರಿಸರು.
7ನ್ಯಾಯವನ್ನು ಕಹಿಯಾಗಿಸುವವರೇ, ಧರ್ಮವನ್ನು ಕಸವಾಗಿಸುವವರೇ, ನಿಮಗೆ ಧಿಕ್ಕಾರ!

8 ಕೃತ್ತಿಕೆ, ಮೃಗಶಿರ, ನಕ್ಷತ್ರಪುಂಜಗಳನು
ಸೃಜಿಸಿದಾತನು
ಕತ್ತಲನು ಬೆಳಕಾಗಿ, ಹಗಲನು ಇರುಳಾಗಿ
ಮಾಡುವವನು,
ಕಡಲಿನ ಜಲವನು ಮೇಲೆತ್ತಿ, ಧರೆಗೆ
ಮಳೆಗರೆವಾತನು,
9 ಬಲಾಢ್ಯರನ್ನು ತಟ್ಟನೆ ಬಡಿದು ಕೋಟೆಗಳ
ಕೆಡವುವಾತನು ಆತನೇ,
ಸರ್ವೇಶ್ವರಸ್ವಾಮಿ ಎಂಬುದೇ
ಆತನ ನಾಮಧೇಯ.

10 ಕಂಡ ದೋಷವನ್ನು ಮಂಟಪದಲ್ಲಿ ಖಂಡಿಸುವವನನ್ನು ನೀವು ಹಗೆಮಾಡುತ್ತೀರಿ; ನ್ಯಾಯವಾದಿಗಳ ಮೇಲೆ ದ್ವೇಷ ಸಾಧಿಸುತ್ತೀರಿ.
11ಬಡಬಗ್ಗರನ್ನು ತುಳಿಯುತ್ತೀರಿ; ಅವರ ದವಸ ಧಾನ್ಯಗಳನ್ನು ಕಸಿದುಕೊಳ್ಳುತ್ತೀರಿ. ಆದ್ದರಿಂದ ನೀವು ಕಟ್ಟಿರುವ ಕೆತ್ತನೆಯ ಕಲ್ಲುಮನೆಗಳಲ್ಲಿ ವಾಸಮಾಡಲಾರಿರಿ. ನೀವು ನೆಟ್ಟಿರುವ ಫಲಭರಿತ ದ್ರಾಕ್ಷಾಬಳ್ಳಿಗಳಿಂದ ರಸವನ್ನು ಕುಡಿಯಲಾರಿರಿ.

12 ಸಜ್ಜನರನ್ನು ಹಿಂಸಿಸಿ, ಲಂಚಕ್ಕೆ ಕೈ ಒಡ್ಡುವವರೇ, ನ್ಯಾಯಮಂಟಪದಲ್ಲಿ ಬಡವರಿಗೆ ನ್ಯಾಯದೊರಕಿಸದಿರುವವರೇ, ನಿಮ್ಮ ಪಾಪಗಳು ಅಪಾರ! ನಿಮ್ಮ ದ್ರೋಹಗಳು ಬಹಳ! ಇದು ನನಗೆ ಗೊತ್ತು.
13ಕಾಲವು ಕೆಟ್ಟದ್ದಾಗಿ ಇರುವುದರಿಂದ ವಿವೇಕಿಯಾದವನು ಸುಮ್ಮನಿರುವುದು ಲೇಸು.

14 ಕೆಟ್ಟದ್ದನ್ನು ಬಿಟ್ಟುಬಿಡಿ, ಒಳ್ಳೆಯದನ್ನು ಆಸಕ್ತಿಯಿಂದ ಮಾಡಿ; ನೀವು ಬಾಳುವಿರಿ. ಆಗ ನೀವು ಹೇಳಿಕೊಳ್ಳುವಂತೆ, ಸೇನಾಧೀಶ್ವರ ದೇವರಾದ ಸರ್ವೇಶ್ವರ ನಿಮ್ಮೊಡನೆ ಇರುವರು.
15ಕೆಟ್ಟದ್ದನ್ನು ದ್ವೇಷಿಸಿರಿ, ಒಳ್ಳೆಯದನ್ನು ಪ್ರೀತಿಸಿರಿ. ನ್ಯಾಯ ಮಂಟಪದಲ್ಲಿ ಸತ್ಯಕ್ಕೆ ಜಯವಾಗುವಂತೆ ನೋಡಿಕೊಳ್ಳಿರಿ. ಆಗ ಬಹುಶಃ ಸೇನಾಧೀಶ್ವರ ದೇವರಾದ ಸರ್ವೇಶ್ವರ ಅಳಿದುಳಿದ ಜೋಸೆಫನ ವಂಶಕ್ಕೆ ಕರುಣೆತೋರಿಯಾರು.

16 ಸೇನಾಧೀಶ್ವರ ದೇವರಾದ ಸರ್ವೇಶ್ವರಸ್ವಾಮಿ ಇಂತೆನ್ನುತ್ತಾರೆ: “ಬೀದಿ ಚೌಕಗಳಲ್ಲೆಲ್ಲ ಗೋಳಾಟ ಇರುವುದು. ಹಾದಿಬೀದಿಗಳಲ್ಲೆಲ್ಲ ‘ಅಯ್ಯಯ್ಯೋ’ ಎಂದು ಜನರು ಪ್ರಲಾಪಿಸುವರು. ರೈತರನ್ನು

ಕಣ್ಣೀರಿಡುವುದಕ್ಕೂ ಶೋಕವೃತ್ತಿಯವರನ್ನು ಗೋಳಾಡುವುದಕ್ಕೂ ಕರೆಯಲಾಗುವುದು. 17ಪ್ರತಿಯೊಂದು
ದ್ರಾಕ್ಷಾತೋಟದಲ್ಲಿ ಜನರು ರೋದಿಸುವರು. ಏಕೆಂದರೆ ನಿಮ್ಮನ್ನು ದಂಡಿಸಲು ನಿಮ್ಮ ಮಧ್ಯೆ ಹಾದು
ಹೋಗಲಿದ್ದೇನೆ, ಇದು ಸರ್ವೇಶ್ವರಸ್ವಾಮಿಯ ನುಡಿ."

18 ಸ್ವಾಮಿಯ ಆ ದಿನಕ್ಕಾಗಿ ಕಾತುರದಿಂದ ಕಾದಿರುವವರೇ, ಅಯ್ಯೋ ನಿಮಗೆ ಕೇಡು; ಆ ದಿನ
ಏನಾಗುತ್ತದೆಂದು ನಿಮಗೆ ಗೊತ್ತೆ? ಸ್ವಾಮಿಯ ಆ ದಿನ ನಿಮಗೆ ಬೆಳಕಾಗಿರದು, ಕತ್ತಲೆಯ ದಿನವಾಗಿರುವುದು.
19ಅದು ಹೇಗೆಂದರೆ: "ಸಿಂಹದ ಬಾಯಿಯಿಂದ ತಪ್ಪಿಸಿಕೊಂಡು ಓಡುತ್ತಿರುವವನು ಕರಡಿಯನ್ನು
ಎದುರುಗೊಳ್ಳುವಂತೆ ಆಗುವುದು ಅಥವಾ ಅವನು ಅಲ್ಲಿಂದ ಮನೆಗೆ ಓಡಿಬಂದು ಗೋಡೆಯ ಮೇಲೆ
ಕೈಯೂರಲು ಅವನಿಗೆ ಹಾವು ಕಚ್ಚಿದಂತೆ ಆಗುವುದು. 20ಖಂಡಿತವಾಗಿ ಸ್ವಾಮಿಯ ದಿನ ಬೆಳಕಾಗಿರದು,
ಕತ್ತಲೆಯಾಗಿರುತ್ತದೆ, ಒಂದು ಚುಕ್ಕೆಯೂ ಇಲ್ಲದ ಕಾರಿರುಳಂತಿರುತ್ತದೆ.

21 "ನಿಮ್ಮ ಹಬ್ಬಹುಣ್ಣಿಮೆಗಳನ್ನು ಹಗೆ ಮಾಡುತ್ತೇನೆ, ತುಚ್ಛೀಕರಿಸುತ್ತೇನೆ. ನಿಮ್ಮ ಉತ್ಸವಗಳ
ವಾಸನೆಯೂ ನನಗೆ ಬೇಡ. 22ನೀವು ನನಗೆ ದಹನಬಲಿದಾನಗಳನ್ನು, ಧಾನ್ಯ ನೈವೇದ್ಯಗಳನ್ನು
ಅರ್ಪಿಸುವುದಕ್ಕೆ ಬಂದರೂ ನಾನು ಅವುಗಳನ್ನು ಸ್ವೀಕರಿಸುವುದಿಲ್ಲ. ಸಮಾಧಾನದ ಯಜ್ಞವಾಗಿ ನೀವು
ಒಪ್ಪಿಸುವ ಕೊಬ್ಬಿದ ಪಶುಗಳನ್ನು ನಾನು ಕಟಾಕ್ಷಿಸೆನು. 23ನಿಮ್ಮ ಭಜನೆ ನಿಂತುಹೋಗಲಿ; ನಿಮ್ಮ
ವೀಣಾವಾದ್ಯಗಳು ತೊಲಗಲಿ. 24ನ್ಯಾಯನೀತಿ ಹೊಳೆಯಂತೆ ಹರಿಯಲಿ; ಸದ್ಧರ್ಮ ಮಹಾನದಿಯಂತೆ
ಪ್ರವಹಿಸಲಿ.

25 "ಇಸ್ರಯೇಲಿನ ವಂಶದವರೇ, ನಲವತ್ತು ವರ್ಷಗಳ ಕಾಲ ನೀವು ಮರಳುಗಾಡಿನಲ್ಲಿದ್ದಾಗ,
ಬಲಿಪ್ರಾಣಿಗಳನ್ನಾಗಲೀ, ಧಾನ್ಯನೈವೇದ್ಯಗಳನ್ನಾಗಲಿ ನೀವು ಅರ್ಪಿಸಬೇಕೆಂದು ನಾನು ಕೇಳಿದ್ದುಂಟೋ?
26ಆದರೆ ಈಗ ನೀವು ನಿರ್ಮಿಸಿಕೊಂಡಿರುವ ಮೂರ್ತಿಗಳಾದ ಸಿಕ್ಕುತ್ ರಾಜೇಶ್ವರನನ್ನೂ ಕಿಯೂನ್ ಎಂಬ
ನಕ್ಷತ್ರ ದೇವತೆಯನ್ನೂ ನೀವೇ ಹೊತ್ತುಕೊಂಡು ಹೋಗಬೇಕಾಗುವುದು. 27ಏಕೆಂದರೆ ನಾನು ನಿಮ್ಮನ್ನು
ದಮಸ್ಕದಿಂದ ಆಚೆ ತಳ್ಳಿ ಸೆರೆಯಾಳುಗಳನ್ನಾಗಿ ಕಳುಹಿಸುವೆನು." ಇದು ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ
ನುಡಿ.

### ಇಸ್ರಯೇಲಿನ ವಿನಾಶ

**6** ಇಸ್ರಯೇಲಿನ ಜನರು ನಿಮ್ಮ ಸಹಾಯಕೋರಿ ನಿಮ್ಮನ್ನು ಹುಡುಕಿಕೊಂಡು ಬರುವಷ್ಟು
ಪ್ರತಿಭಾವಂತರಾಗಿರುವವರೇ, ನಿಮಗೆ ಧಿಕ್ಕಾರ! 2ಕಲ್ನೆ ಪಟ್ಟಣಕ್ಕೆ ಹೋಗಿ ನೋಡಿ. ಅಲ್ಲಿಂದ ಪ್ರಖ್ಯಾತ
ಪಟ್ಟಣವಾದ ಹಮಾತಿಗೆ ನಡೆಯಿರಿ. ಹಮಾತಿನಿಂದ ಫಿಲಿಷ್ಟಿಯರ ಊರಾದ ಗಾತ್ ನಗರಕ್ಕೆ
ಇಳಿದುಹೋಗಿರಿ. ಅವು ನಿಮ್ಮ ರಾಜ್ಯಗಳಿಗಿಂತ ದೊಡ್ಡವೋ? ಅವುಗಳ ಪ್ರಾಂತ್ಯ ನಿಮ್ಮ ಪ್ರಾಂತ್ಯಕ್ಕಿಂತ
ಹಿರಿದೋ? 3ಆ ದುರ್ದಿನದಿಂದ ತಪ್ಪಿಸಿಕೊಳ್ಳಲು ಯತ್ನಿಸುವ ಮುಖಂಡರೇ, ಮತ್ತಷ್ಟು ಶೀಘ್ರವಾಗಿ
ಹಿಂಸಾಕ್ರಮಣವನ್ನು ಬರಮಾಡಿಕೊಳ್ಳುತ್ತೀರಿ.

4 ದಂತದ ಮಂಚಗಳ ಮೇಲೆ ಮಲಗುವ ಜನರೇ, ನಿಮಗೆ ಧಿಕ್ಕಾರ! ಸುಖಾಸನಗಳಲ್ಲೂ
ಸುಪ್ಪತ್ತಿಗೆಯ ಮೇಲೂ ಹಾಯಾಗಿ ಒರಗಿಕೊಂಡಿರುವವರೇ, ನಿಮಗೆ ಧಿಕ್ಕರ! ಮಂದೆಯ ಕುರಿಮರಿಗಳನ್ನು,
ಕೊಟ್ಟಿಗೆಯ ಕರುಗಳನ್ನು ಕೊಂದು ತಿನ್ನುವವರೇ, ನಿಮಗೆ ಧಿಕ್ಕಾರ! 5ವೀಣೆಯನ್ನು ನುಡಿಸುತ್ತಾ ಮನಸ್ಸು
ಬಂದಂತೆ ಹಾಡುವವರೇ, ದಾವೀದನಂತೆ ಹೊಸ ವಾದ್ಯಸಂಗೀತಗಳನ್ನು ರಚಿಸುವವರೇ, ನಿಮಗೆ ಧಿಕ್ಕಾರ!

6 ಬೋಗುಣಿಬಟ್ಟಲುಗಳಲ್ಲಿ ದ್ರಾಕ್ಷಾರಸವನ್ನು ಕುಡಿಯುವವರೇ, ಅತ್ಯುತ್ತಮ ಸುಗಂಧ ತೈಲಗಳನ್ನು
ಲೇಪಿಸಿಕೊಳ್ಳುವವರೇ, ನಿಮಗೆ ಧಿಕ್ಕಾರ! ಏಕೆಂದರೆ ನೀವು ಜೋಸೆಫನ ವಂಶದವರ ವಿನಾಶದ ಬಗ್ಗೆ
ನಿಶ್ಚಿಂತರಾಗಿದ್ದೀರಿ. 7ಆದುದರಿಂದ ಗಡೀಪಾರಾಗುವವರಲ್ಲಿ ನೀವೇ ಮೊದಲಿಗರಾಗುವಿರಿ. ಆಗ ನಿಮ್ಮ
ಸುಖಾಸನಗಳು ಮತ್ತು ಆಮೋದ ಪ್ರಮೋದಗಳು ಗತಿಸಿ ಹೋಗುವುವು.

8 ಸೇನಾಧೀಶ್ವರ ದೇವರಾದ ಸರ್ವೇಶ್ವರಸ್ವಾಮಿ ಪ್ರಮಾಣಮಾಡಿ ಹೇಳಿದ್ದೇನೆಂದರೆ: "ಯಕೋಬ ವಂಶದವರ ಉದ್ಧಟತನವನ್ನು ದ್ವೇಷಿಸುತ್ತೇನೆ. ಅವರ ಮೋಜಿನ ಮಹಲುಗಳನ್ನು ತೃಣೀಕರಿಸುತ್ತೇನೆ. ಅವರ ರಾಜಧಾನಿಯನ್ನೂ ಅದರಲ್ಲಿರುವುದೆಲ್ಲವನ್ನೂ ಶತ್ರುವಶಕ್ಕೆ ಒಪ್ಪಿಸುತ್ತೇನೆ."

9 ಮನೆಯೊಂದರಲ್ಲಿ ಹತ್ತು ಮಂದಿ ಉಳಿದಿದ್ದರೂ ಅವರೆಲ್ಲರೂ ಸಾಯುವರು. 10ಶವವನ್ನು ಸುಡಲು ಬಂದ ಸಂಬಂಧಿಕರು ಹೆಣವನ್ನು ಮನೆಯೊಳಗಿಂದ ತೆಗೆದುಕೊಂಡು ಹೋದಾಗ, "ನಿಮ್ಮಲ್ಲಿ ಯಾರಾದರೂ ಉಳಿದಿದ್ದಾರೋ?" ಎಂದು ಒಳಮನೆಯಲ್ಲಿ ಇರುವವನನ್ನು ಕೇಳಿದರೆ, ಅವನು "ಇಲ್ಲ" ಎನ್ನುವನು. ಆಗ ಆ ಸಂಬಂಧಿಕನು, "ಮೌನದಿಂದಿರು! ಸರ್ವೇಶ್ವರಸ್ವಾಮಿಯ ಹೆಸರನ್ನೂ ಎತ್ತಕೂಡದು" ಎಂದು ಎಚ್ಚರಿಸುವನು.

11 ಇಗೋ, ಸರ್ವೇಶ್ವರ ಆಜ್ಞಾಪಿಸಲು, ಕುಸಿದು ಬೀಳುವುವು ಮಹಾಸೌಧಗಳು, ನುಚ್ಚು ನೂರಾಗುವುವು ಚಿಕ್ಕ ಚಿಕ್ಕ ಮನೆಗಳು. 12ಕಲ್ಲು ಬಂಡೆಗಳ ಮೇಲೆ ಕುದುರೆಗಳು ಓಡಾಡುವುದುಂಟೋ? ಎತ್ತು ಹೋರಿಗಳಿಂದ ಕಡಲನ್ನು ಉಳುವುದುಂಟೋ? ನೀವೋ, ವಿಷವನ್ನಾಗಿಸಿದ್ದೀರಿ ನ್ಯಾಯನೀತಿಯನ್ನು, ಕಹಿಯಾಗಿಸಿದ್ದೀರಿ ಧರ್ಮದ ಸತ್ಫಲವನ್ನು.

13 ನೀವು ಹೆಚ್ಚಳಪಡುವುದು 'ಲೊದೆ ಬಾರಿನ' ಗೆಲುವಿನಲ್ಲಿ! ಸ್ವಬಲದಿಂದಲೇ ಕರ್ನಾಯಿಮನ್ನು ಜಯಿಸಿದ್ದೇವೆಂದು ಕೊಚ್ಚಿಕೊಳ್ಳುವುದರಲ್ಲಿ!

14 ಇಂತೆನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ: "ಎತ್ತಿಕಟ್ಟುವೆನು ನಿಮಗೆ ವಿರುದ್ಧವಾಗಿ ಜನಾಂಗವೊಂದನ್ನು; ಸದೆಬಡಿವುದದು ನಿಮ್ಮನ್ನು ಹಮಾತಿನ ದಾರಿಯಿಂದ ಅರಬಾ ತೊರೆಯ ತನಕ."

### ಮಿಡತೆಗಳ ದರ್ಶನ

**7** ಒಡೆಯರಾದ ಸರ್ವೇಶ್ವರ ನನಗೆ ತೋರಿಸಿದ ದರ್ಶನ ಇದು: ಹಿಂಗಾರು ಮಳೆ ಬಿದ್ದಿತ್ತು. ಪೈರು ಸೊಂಪಾಗಿ ಬೆಳೆಯಲು ಆರಂಭಿಸಿತ್ತು. ಈಗಾಗಲೇ ರಾಜಾದಾಯದ ಹುಲ್ಲಿನ ಕೊಯಿಲು ಮುಗಿದು ಮತ್ತೆ ಹುಲ್ಲು ಬೆಳೆಯುತ್ತಿತ್ತು. ಆಗ ಸರ್ವೇಶ್ವರ ಮಿಡತೆಗಳ ಗುಂಪೊಂದನ್ನು ಹೊರಡಿಸಿದರು. 2ಮಿಡತೆಗಳು ನಾಡಿನ ಪೈರು ಪಚ್ಚೆಯನ್ನೆಲ್ಲ ತಿಂದುಬಿಟ್ಟವು. ಆಮೇಲೆ ನಾನು ಪ್ರಭುವಿಗೆ ಹೀಗೆಂದು ಮೊರೆಯಿಟ್ಟೆ: "ಒಡೆಯರಾದ ಸರ್ವೇಶ್ವರಾ, ನಮ್ಮನ್ನು ಆಲಿಸಿ, ಕ್ಷಮಿಸಿರಿ; ಅತಿ ಚಿಕ್ಕದಾದ ಯಕೋಬ ಜನಾಂಗ ಈ ಪಿಡುಗಿನಿಂದ ಉಳಿಯುವುದುಂಟೆ?"

3 ಇದನ್ನು ಕೇಳಿ ಸರ್ವೇಶ್ವರ ಮನಮರುಗಿದರು. "ಈ ದರ್ಶನ ನೆರವೇರುವುದಿಲ್ಲ" ಎಂದು ಅಭಯವಿತ್ತರು.

### ಅಗ್ನಿಯ ದರ್ಶನ

4 ಒಡೆಯರಾದ ಸರ್ವೇಶ್ವರ ನನಗೆ ಇನ್ನೊಂದು ದರ್ಶನವನ್ನು ತೋರಿಸಿದರು. ಅವರು ತನ್ನ ಜನರನ್ನು ದಂಡಿಸುವುದಕ್ಕಾಗಿ ಬೆಂಕಿಯನ್ನು ಬರಮಾಡಿದರು. ಅದು ಆಳವಾದ ಮಹಾಸಾಗರವನ್ನೂ ಇಡೀ ನಾಡನ್ನೂ ಕಬಳಿಸುವುದರಲ್ಲಿತ್ತು. 5ಆಗ ನಾನು ಆ ಸ್ವಾಮಿಗೆ: "ಆಲಿಸಿ, ಈ ಪಿಡುಗನ್ನು ತಪ್ಪಿಸಿ, ಅತಿ ಚಿಕ್ಕದಾದ ಯಕೋಬ ಜನಾಂಗ ಮುಂದೆ ಹೇಗೆ ಉಳಿದೀತು" ಎಂದು ಮೊರೆಯಿಟ್ಟೆ.

6 ಒಡೆಯರಾದ ಸರ್ವೇಶ್ವರ ಇದನ್ನು ಕೇಳಿ ಮನಮರುಗಿ: "ಈ ದರ್ಶನ ನೆರವೇರುವುದಿಲ್ಲ" ಎಂದು ಅಭಯವಿತ್ತರು.

### ನೂಲುಗುಂಡಿನ ದರ್ಶನ

7 ಆ ಸ್ವಾಮಿಯಿಂದ ನನಗೆ ಮತ್ತೊಂದು ದರ್ಶನವಾಯಿತು. ಸ್ವಾಮಿ ನೂಲು ಮಟ್ಟದ ಗೋಡೆಯ ಮೇಲೆ ನಿಂತಿದ್ದರು. ಅವರ ಕೈಯಲ್ಲಿ ನೂಲುಗುಂಡೊಂದು ಇತ್ತು. 8ಅವರು ನನಗೆ: "ಆಮೋಸನೇ, ನಿನ್ನ ಕಣ್ಣಿಗೆ ಕಾಣಿಸುವುದೇನು?" ಎಂದು ಕೇಳಿದರು. ನಾನು "ಒಂದು ನೂಲುಗುಂಡು," ಎಂದು ಉತ್ತರಕೊಟ್ಟೆ.

ಆಗ ಸ್ವಾಮಿ, "ಇಗೋ, ನನ್ನ ಜನರಾದ ಇಸ್ರಯೇಲಿನ ಮಧ್ಯೆ ನೂಲುಗುಂಡನ್ನು ಹಿಡಿದು ಅವರ ನಡತೆ–ಗೋಡೆ ನೆಟ್ಟಗಿಲ್ಲವೆಂದು ತೋರಿಸುವೆನು. ಅವರನ್ನು ಕಂಡೂ ಕಾಣದಂತಿರದೆ, ದಂಡಿಸಿಯೇ ತೀರುವೆನು. 9ಇಸಾಕನ ವಂಶದವರ ಎತ್ತರವಾದ ಪೂಜಾ ಮಂದಿರಗಳು ನೆಲಸಮವಾಗುವುವು. ಇಸ್ರಯೇಲಿನ ಪವಿತ್ರಾಲಯಗಳು ಪಾಳುಬೀಳುವುವು. ಯಾರೊಬ್ಬಾಮನ ಮನೆತನ ಕತ್ತಿಗೆ ತುತ್ತಾಗುವುದು," ಎಂದರು.

### ಆಮೋಸನ ಉಚ್ಚಾಟನೆ

10 ತರುವಾಯ ಬೇತೇಲಿನ ಯಾಜಕನಾದ ಅಮಚ್ಯನು ಇಸ್ರಯೇಲಿನ ಅರಸ ಯಾರೊಬ್ಬಾಮನಿಗೆ ಹೀಗೆಂದು ಹೇಳಿಕಳುಹಿಸಿದನು: "ಆಮೋಸನು ನಿನಗೆ ವಿರುದ್ಧವಾಗಿ ಇಸ್ರಯೇಲರಲ್ಲಿ ಒಳಸಂಚು ಹೂಡಿದ್ದಾನೆ. ಅವನ ಮಾತುಗಳನ್ನು ನಾಡು ಸಹಿಸಲಾರದು. 11ಏಕೆಂದರೆ, "ಯಾರೊಬ್ಬಾಮನು ಖಡ್ಗದಿಂದ ಹತನಾಗುವನು. ಇಸ್ರಯೇಲ್ ಸ್ವಂತ ನಾಡಿನಿಂದ ಪರದೇಶಕ್ಕೆ ಒಯ್ಯಲ್ಪಡುವುದು ಖಂಡಿತ ಎಂದು ಅವನು ನುಡಿದಿದ್ದಾನೆ."

12 ಆ ಬಳಿಕ ಅಮಚ್ಯನು ಆಮೋಸನಿಗೆ, "ಕಣಿಹೇಳುವವನೇ, ತೊಲಗು, ಜುದೇಯ ನಾಡಿಗೆ ಓಡಿಹೋಗು; ಅಲ್ಲಿ ಪ್ರವಾದನೆಮಾಡಿ ಹೊಟ್ಟೆ ಹೊರೆದುಕೊ. 13ಬೇತೇಲಿನಲ್ಲಿ ಇನ್ನು ಪ್ರವಾದನೆ ಮಾಡಬೇಡ. ಇದು ರಾಜನ ಗರ್ಭಗುಡಿ, ರಾಜ್ಯದ ಪವಿತ್ರಾಲಯ," ಎಂದನು.

14 ಅದಕ್ಕೆ ಆಮೋಸನು ಪ್ರತ್ಯುತ್ತರವಾಗಿ: "ನಾನು ಪ್ರವಾದಿಯಲ್ಲ, ಪ್ರವಾದಿಯ ಮಗನೂ ಅಲ್ಲ. ನಾನೊಬ್ಬ ಗೊಲ್ಲ, ಅತ್ತಿಹಣ್ಣನ್ನು ಕೀಳುವವನು. 15ಮಂದೆಕಾಯುವುದರಿಂದ ಸರ್ವೇಶ್ವರ ನನ್ನನ್ನು ಬಿಡಿಸಿದರು. ನೀನು ಹೋಗಿ ನನ್ನ ಜನರಾದ ಇಸ್ರಯೇಲರಿಗೆ ಪ್ರವಾದನೆಮಾಡು' ಎಂದು ಹೇಳಿಕಳುಹಿಸಿದರು.

16 "ಆದ್ದರಿಂದ ಆ ಸರ್ವೇಶ್ವರಸ್ವಾಮಿಯ ವಾಕ್ಯವನ್ನು ಗಮನಿಸು: 'ಇಸ್ರಯೇಲಿಗೆ ವಿರುದ್ಧ ಪ್ರವಾದನೆ ಮಾಡಬೇಡ; ಇಸಾಕನ ಮನೆತನದ ವಿರುದ್ಧ ಮಾತೆತ್ತಬೇಡ; ಎಂದು ನೀನು ಹೇಳುತ್ತೀಯಲ್ಲವೆ? 17ನೀನು ಹೀಗೆ ಹೇಳಿದ್ದರಿಂದ ಸರ್ವೇಶ್ವರ ಇಂತೆನ್ನುತ್ತಾರೆ: 'ನಿನ್ನ ಹೆಂಡತಿ ಈ ಪಟ್ಟಣದಲ್ಲಿ ವೇಶ್ಯೆಯಾಗುವಳು. ನಿನ್ನ ಪುತ್ರ ಪುತ್ರಿಯರು ಕತ್ತಿಗೆ ತುತ್ತಾಗುವರು. ನಿನ್ನ ನಾಡನ್ನು ಶತ್ರುಗಳು ವಶಪಡಿಸಿಕೊಂಡು ಹಂಚಿಕೊಳ್ಳುವರು. ನೀನು ಸಹ ಅಪವಿತ್ರವಾದ ನಾಡಿನಲ್ಲಿ ಸಾಯುವೆ. ಇಸ್ರಯೇಲರು ಖಂಡಿತವಾಗಿ ಸ್ವಂತ ನಾಡಿನಿಂದ ಪರದೇಶಕ್ಕೆ ಸೆರೆಯಾಗಿ ಹೋಗುವರು'," ಎಂದು ಹೇಳಿದನು.

### ಮಾಗಿದ ಹಣ್ಣಿನ ದರ್ಶನ

**8** ಒಡೆಯರಾದ ಸರ್ವೇಶ್ವರ ನನಗೆ ಈ ದರ್ಶನವನ್ನು ತೋರಿಸಿದರು: ಮಾಗಿದ ಹಣ್ಣಿನ ಬುಟ್ಟಿಯೊಂದು ಕಾಣಿಸಿತು. 2ಅವರು ನನಗೆ: "ಆಮೋಸನೆ, ನಿನ್ನ ಕಣ್ಣಿಗೆ ಕಾಣಿಸುವುದೇನು?" ಎಂದು ಕೇಳಿದರು. "ಮಾಗಿದ ಹಣ್ಣಿನ ಒಂದು ಬುಟ್ಟಿ" ಎಂದು ಉತ್ತರಿಸಿದೆ. ಆಗ ಸರ್ವೇಶ್ವರ ನನಗೆ ಹೀಗೆಂದರು: "ಇಸ್ರಯೇಲರಾದ ನನ್ನ ಜನರಿಗೆ ಕಡೆಗಾಲ ಮಾಗುತ್ತಾ ಬಂದಿದೆ. ಇನ್ನು ಅವರನ್ನು ಕಂಡೂ ಕಾಣದಂತೆ ಇರಲಾರೆ. ಅವರನ್ನು ದಂಡಿಸಿಯೇ ತೀರುವೆನು. 3ಆ ದಿನದಲ್ಲಿ ಆಸ್ಥಾನದ ಗೀತೆಗಳು ಶೋಕಗೀತೆಗಳಾಗಿ ಮಾರ್ಪಡುವುವು. ಹೆಣಗಳು ಎಲ್ಲೆಲ್ಲೂ ಬಿದ್ದಿರುವುವು. ಅವುಗಳನ್ನು ಸದ್ದುಗದ್ದಲವಿಲ್ಲದೆ ಬಿಸಾಡಲಾಗುವುದು," ಇದು ಸರ್ವೇಶ್ವರ ಸ್ವಾಮಿಯ ನುಡಿ.

4 ದಿಕ್ಕಿಲ್ಲದವರನ್ನು ತುಳಿದುಬಿಡುವವರೇ, ನಾಡಿನ ಬಡವರನ್ನು ನಿರ್ಮೂಲ ಮಾಡುವವರೇ, ಕೇಳಿ, 5"ದವಸಧಾನ್ಯಗಳನ್ನು ಮಾರಬೇಕಲ್ಲ, ಈ ಅಮಾವಾಸ್ಯೆ ತೀರುವುದು ಯಾವಾಗ? ಗೋದಿಯ ವ್ಯಾಪಾರ ಮಾಡಬೇಕಾಗಿದೆ. ಸಬ್ಬತ್ ದಿನ ಕಳೆಯುವುದು ಯಾವಾಗ? ಕೊಳಗವನ್ನು ಕಿರಿದು ಮಾಡೋಣ, ತೊಲವನ್ನು ಹಿರಿದು ಮಾಡೋಣ, ಕಳ್ಳತಕ್ಕಡಿಯನ್ನು ಬಳಸೋಣ: 6ಬಡವರನ್ನು ಬೆಳ್ಳಿಗೆ, ದಿಕ್ಕಿಲ್ಲದವನನ್ನು ಒಂದು ಜೊತೆ ಕೆರಕ್ಕೆ ಕೊಂಡುಕೊಳ್ಳೋಣ; ಗೋದಿಯ ನುಚ್ಚುನುಸಿಯನ್ನೂ ಬಿಡದಂತೆ ಮಾರಿಬಿಡೋಣ," ಎಂದುಕೊಳ್ಳುತ್ತೀರಿ, ಅಲ್ಲವೆ?

7 ಯಕೋಬನ ಮಹಿಮಾನ್ವಿತ ಸರ್ವೇಶ್ವರ ಆಣೆಯಿಟ್ಟು ಹೇಳುವುದೇನೆಂದರೆ; "ಖಂಡಿತವಾಗಿ ಅವರ ದುಷ್ಕೃತ್ಯಗಳಲ್ಲಿ ಯಾವುದನ್ನೂ ಎಂದಿಗೂ ನಾನು ಮರೆಯಲಾರೆ. 8ಅವರ ದುಷ್ಕೃತ್ಯಗಳ ನಿಮಿತ್ತವೇ ನಾಡು ಕಂಪಿಸುವುದು; ನಿವಾಸಿಗಳೆಲ್ಲರು ದುಃಖಿಸುವರು. ನಾಡೆಲ್ಲವು ನೈಲ್ ನದಿಯಂತೆ ಉಬ್ಬುವುದು. ಅಲ್ಲೋಲ ಕಲ್ಲೋಲವಾಗಿ ಈಜಿಪ್ಟಿನ ನದಿಯಂತೆ ಕುಗ್ಗಿ ಕರಗಿಹೋಗುವುದು. 9ಒಡೆಯರಾದ ಸರ್ವೇಶ್ವರ ಇಂತೆನ್ನುತ್ತಾರೆ: "ಆ ದಿನದಂದು ನಡು ಮಧ್ಯಾಹ್ನದಲ್ಲಿ ಸೂರ್ಯನನ್ನು ಮುಳುಗಿಸುವೆನು. ಹಾಡು ಹಗಲಲ್ಲೇ ಭೂಮಿಯನ್ನು ಕತ್ತಲಾಗಿಸುವೆನು. 10ನಿಮ್ಮ ಕೊಂಡಾಟದಿನಗಳನ್ನು ಗೋಳಾಟ ದಿನಗಳನ್ನಾಗಿ ಮಾರ್ಪಡಿಸುವೆನು. ನಿಮ್ಮ ಹರ್ಷ ಗೀತೆಗಳನ್ನು ಶೋಕಗೀತೆಗಳನ್ನಾಗಿ ಬದಲಾಯಿಸುವೆನು. ನೀವೆಲ್ಲರೂ ಸೊಂಟಕ್ಕೆ ಗೋಣಿತಟ್ಟನ್ನು ಸುತ್ತಿಕೊಂಡು, ತಲೆ ಬೋಳಿಸಿಕೊಳ್ಳುವಂತೆ ಮಾಡುವೆನು. ಏಕಮಾತ್ರ ಪುತ್ರನನ್ನು ಕಳೆದುಕೊಂಡವರಂತೆ ನೀವು ಅತ್ತು ಪ್ರಲಾಪಿಸುವಿರಿ. ಆ ದಿನವೆಲ್ಲಾ ನಿಮಗೆ ಕರಾಳ ದಿನವಾಗುವುದು."

11 ಒಡೆಯರಾದ ಸರ್ವೇಶ್ವರ ಇಂತೆನ್ನುತ್ತಾರೆ: "ದಿನಗಳು ಬರಲಿವೆ. ಅಂದು ನಾಡಿನಲ್ಲಿ ಕ್ಷಾಮವನ್ನುಂಟುಮಾಡುವೆನು. ಅದು ಅನ್ನದ ಕ್ಷಾಮವಲ್ಲ, ನೀರಿನ ಕ್ಷಾಮವೂ ಅಲ್ಲ; ಸರ್ವೇಶ್ವರನ ಸಂದೇಶಕ್ಕಾಗಿ ಹಸಿದು ಹಂಬಲಿಸುವ ಕ್ಷಾಮ. 12ಜನರು ಸಮುದ್ರದಿಂದ ಸಮುದ್ರದವರೆಗೆ ಉತ್ತರದಿಂದ ಪೂರ್ವದವರೆಗೆ ಅತ್ತಿತ್ತ ಹುಡುಕುತ್ತಾ ಬಳಲಿಹೋಗುವರು. ಆದರೂ ಅದು ಸಿಗದು. 13ಆ ದಿನದಂದು ಗಟ್ಟಿಮುಟ್ಟಾದ ಯುವಕ ಯುವತಿಯರೂ ಬಾಯಾರಿಕೆಯಿಂದ ಮೂರ್ಛೆ ಹೋಗುವರು. 14ದಾನೇ, ನಿನ್ನ ದೇವರ ಜೀವದಾಣೆ' ಎಂದೂ, 'ಬೇರ್ಷೆಬಾ ಯಾತ್ರೆಯ ಜೀವದಾಣೆ' ಎಂದೂ ಸಮಾರ್ಯದ ವಿಗ್ರಹಗಳ ಮೇಲೆ ಪ್ರಮಾಣ ಮಾಡುವವರು ಮತ್ತೆ ಏಳದಂತೆ ಬಿದ್ದು ಹೋಗುವರು."

## ದೇವರಿಂದ ನ್ಯಾಯತೀರ್ಪು

**9** ಆಗ ಸರ್ವೇಶ್ವರಸ್ವಾಮಿ ಬಲಿಪೀಠದ ಪಕ್ಕದಲ್ಲಿ ನಿಂತಿರುವುದನ್ನು ಕಂಡೆನು. ಅವರು ನನಗೆ ಹೀಗೆಂದು ಅಪ್ಪಣೆ ಮಾಡಿದರು: "ಹೊಸ್ತಿಲುಗಳು ಕದಲುವಂತೆ ಕಂಬಳಗಳ ಬೋದಿಗೆಗೆ ಬಲವಾಗಿ ಹೊಡೆ. ಅವು ಕುಸಿದು ಎಲ್ಲರ ತಲೆಯ ಮೇಲೆ ಬೀಳಲಿ. ಅಳಿದುಳಿದವರನ್ನು ಖಡ್ಗಕ್ಕೆ ತುತ್ತಾಗಿಸುವೆನು. ಅವರಲ್ಲಿ ಯಾರೂ ಓಡಿಹೋಗರು; ಯಾರೂ ತಪ್ಪಿಸಿಕೊಳ್ಳರು. 2ಅವರು ಪಾತಾಳಕ್ಕೆ ಇಳಿದುಹೋದರೂ ಅಲ್ಲಿಂದ ಅವರನ್ನು ಎಳೆದುತರುವೆನು. ಆಕಾಶಕ್ಕೆ ಹತ್ತಿಹೋದರೂ ಅಲ್ಲಿಂದ ಇಳಿಸುವೆನು. 3ಕರ್ಮೆಲ್ ಬೆಟ್ಟದ ತುದಿಯಲ್ಲಿ ಅವಿತುಕೊಂಡರೂ ಅವರನ್ನು ಹುಡುಕಿ ಅಲ್ಲಿಂದ ಹಿಡಿದು ತರುವೆನು. ನನ್ನ ಕಣ್ಣುತಪ್ಪಿಸಿ ಸಮುದ್ರದ ತಳದಲ್ಲಿ ಅಡಗಿಕೊಂಡರೂ, ಅಲ್ಲಿಯೂ ಅವರನ್ನು ಕಚ್ಚುವಂತೆ ಘಟಸರ್ಪಕ್ಕೆ ಆಜ್ಞೆಮಾಡುವೆನು. 4ಶತ್ರುವಶವಾಗಿ ಸೆರೆಗೆ ಹೋಗಿದ್ದರೂ ಅಲ್ಲಿಯೂ ಖಡ್ಗವು ನನ್ನ ಆಜ್ಞಾನುಸಾರ ಅವರನ್ನು ಕೊಲ್ಲುವುದು; ಅವರ ಮೇಲಿಗಾಗಿ ಅಲ್ಲ, ಕೇಡಿಗಾಗಿಯೇ ಅವರ ಮೇಲೆ ಕಣ್ಣಿಡುವೆನು.

5 ಸೇನಾಧೀಶ್ವರ ದೇವರಾದ ಸರ್ವೇಶ್ವರ
  ಮುಟ್ಟಿದ ಮಾತ್ರಕ್ಕೆ
ಕರಗುವುದು ಭೂಮಿ, ಗೋಳಿಡುವುದು ಸಕಲ
  ಜನತೆ
ಉಬ್ಬುವುದು ನಾಡೆಲ್ಲ ನೈಲ್ ನದಿಯಂತೆ
ಕುಗ್ಗಿ ಕರಗುವುದು ಈಜಿಪ್ಟಿನ ನದಿಯಂತೆ.
6 ಉನ್ನತದಲ್ಲಿ ಹಲವು ಉಪ್ಪರಿಗೆಗಳನ್ನು
  ನಿರ್ಮಿಸುವವ ಆತನೆ
ಭುವಿಯಲ್ಲಿ ಗುಮ್ಮಟವನ್ನು ಸ್ಥಾಪಿಸಿ
  ಕೊಂಡವನು ಆತನೆ
ಸಾಗರದ ನೀರನ್ನು ಸೇದಿ ಧರೆಯ ಮೇಲೆ
  ಸುರಿಯುವವ ಆತನೆ

ಆತನ ನಾಮಧೇಯ ಸರ್ವೇಶ್ವರಸ್ವಾಮಿ
ಎಂಬುದೇ.
7 "ಇಸ್ರಯೇಲಿನ ಜನರೇ, ನನ್ನ ದೃಷ್ಟಿಯಲ್ಲಿ ನೀವಾಗಲೀ ಎಥಿಯೋಪಿಯದವರಾಗಲೀ, ಒಂದೇ
ಅಲ್ಲವೆ? ನಾನು ನಿಮ್ಮನ್ನು ಈಜಿಪ್ಟಿನಿಂದ ಕರೆತಂದಂತೆ ಫಿಲಿಷ್ಟಿಯರನ್ನು ಕಫ್ತೋರಿನಿಂದಲೂ, ಅರಾಮ್ಯರನ್ನು
ಕೀರ್ ನಾಡಿನಿಂದಲೂ ಕರೆತರಲಿಲ್ಲವೆ? 8ಒಡೆಯ ಸರ್ವೇಶ್ವರನಾದ ನಾನು ಈ ಪಾಪಮಯ ರಾಜ್ಯದ
ಮೇಲೆ ಕಣ್ಣಿಟ್ಟಿದ್ದೇನೆ ಎಂಬುದನ್ನು ಗಮನಿಸಿರಿ. ಇದನ್ನು ಭೂಮಂಡಲದಿಂದ ನಾಶಮಾಡುವೆನು. ಆದರೆ
ಯಕೋಬ ಮನೆತನವನ್ನು ಸಂಪೂರ್ಣವಾಗಿ ನಾಶಮಾಡೆನು." ಇದು ಸರ್ವೇಶ್ವರಸ್ವಾಮಿಯ ನುಡಿ.
9 "ಇಗೋ, ಧಾನ್ಯವನ್ನು ಜರಡಿಯಲ್ಲಿ ಜಾಲಿಸುವಂತೆ ಇಸ್ರಯೇಲರನ್ನು ಸಕಲ ಜನಾಂಗಗಳೊಡನೆ
ಸೇರಿಸಿ ಜಾಲಿಸಬೇಕೆಂದು ಆಜ್ಞಾಪಿಸುವೆನು. ಹೀಗೆ ಕಾಳನ್ನೂ ಜೊಳ್ಳನ್ನೂ ಬೇರ್ಪಡಿಸುವೆನು. 10'ನಮಗೆ
ಯಾವುದೇ ಆಪತ್ತು ತಟ್ಟದು. ಯಾವುದೇ ವಿಪತ್ತು ಅಡ್ಡಬರದು' ಎಂದುಕೊಳ್ಳುವ ನನ್ನ ಜನರಲ್ಲಿನ
ಪಾಪಿಗಳೆಲ್ಲರು ಖಡ್ಗದಿಂದ ಹತರಾಗುವರು."

## ಇಸ್ರಯೇಲಿಗೆ ಬರಲಿರುವ ಸೌಭಾಗ್ಯ

11 ಸರ್ವೇಶ್ವರ ಇಂತೆನ್ನುತ್ತಾರೆ: "ದಿನ ಬರಲಿದೆ. ಅಂದು ಬಿದ್ದುಹೋಗಿರುವ ದಾವೀದನ
ಗುಡಾರವನ್ನು ಮರಳಿ ಎಬ್ಬಿಸುವೆನು. ಅದರ ಬಿರುಕುಗಳನ್ನು ಮುಚ್ಚುವೆನು. ಹಾಳಾದುದ್ದನ್ನು ಎತ್ತಿ
ನಿಲ್ಲಿಸುವೆನು. ಮೊದಲು ಇದ್ದಂತೆಯೇ ಪುನಃ ನಿರ್ಮಿಸುವೆನು. 12ಹೀಗೆ ನನ್ನ ಜನರು ಎದೋಮಿನ ಮಿಕ್ಕ
ಭಾಗವನ್ನೂ ಸರ್ವೇಶ್ವರನ ಪ್ರಜೆ ಎನ್ನಿಸಿಕೊಂಡ ಸಕಲ ಜನಾಂಗಗಳನ್ನೂ ಸ್ವಾಧೀನಪಡಿಸಿಕೊಳ್ಳುವರು." ಈ
ಕಾರ್ಯವನ್ನು ಸಾಧಿಸುವಂಥ ಸರ್ವೇಶ್ವರಸ್ವಾಮಿಯ ನುಡಿಯಿದು:

13 ಕಾಲ ಬರುವುದು: ಆಗ –
ಹೊಸಬಿತ್ತನೆಯಾಗುವುದು ಕೊಯ್ಯುವವನ
ಹಿಂದೆಯೆ;
ಹೊಸ ಫಸಲು ಸಿದ್ಧವಾಗುವುದು
ದ್ರಾಕ್ಷೆ ತುಳಿಯುವವನ ಮುಂದೆಯೆ.
ಸುರಿಸುವುವು ದ್ರಾಕ್ಷಾರಸವನು ಬೆಟ್ಟಗಳು
ಕರಗುವಂತಿರುವುವು ಅದರಿಂದ ಎಲ್ಲ
ಗುಡ್ಡಗಳು.
14 ಸನಾತನ ಸೌಭಾಗ್ಯಕ್ಕೆ ಮರಳಿಸುವೆನು
ನನ್ನ ಜನರಾದ ಇಸ್ರಯೇಲರನು.
ವಾಸಮಾಡುವರವರು ಪಾಳುಬಿದ್ದ
ಪಟ್ಟಣಗಳನು ಮತ್ತೆ ಕಟ್ಟಿಕೊಂಡು.
ಕುಡಿಯುವರು ಸಮೃದ್ಧಿಯಾಗಿ
ದ್ರಾಕ್ಷಾತೋಟಗಳನು ಮಾಡಿಕೊಂಡು.
ತಿನ್ನುವರು ಯಥೇಚ್ಛವಾಗಿ
ಫಲವೃಕ್ಷಗಳನು ಬೆಳೆಸಿಕೊಂಡು.
15 ಬೇರೂರಿಸುವೆನು ಅವರನು ಸ್ವಂತನಾಡಲಿ
ಕೀಳರಾರೂ ಅವರನು ಅಲ್ಲಿಂದ ಮರಳಿ."
ಇದು ನಿನ್ನ ದೇವರಾದ ಸರ್ವೇಶ್ವರನ ನುಡಿ.